ನಾನು ಇಚ್ಛೆಪಡುತ್ತೇನೆ. ಬೆಂಗಳೂರು–ಮೈಸೂರು ಕಾರಿಡಾರ್ ಪ್ರಾಜೆಕ್ಟ್ ಬಗ್ಗೆ ಇಲ್ಲಿ ಏನು ಚರ್ಚೆಯಾಗುತ್ತಿದೆ ಎಂದರೆ, ಯಾರು ಇದನ್ನು ಹುಟ್ಟುಹಾಕಿದರು ಅಥವಾ ಇಂಥವರು ತಪ್ಪಿತಸ್ಥರಿದ್ದಾರೆ ಎಂದು ಕೆಲವು ಜನರು ಮಾತನಾಡುತ್ತಿದ್ದಾರಲ್ಲಾ, ಅಂಥ ತಪ್ಪಿತಸ್ಥರು ಯಾರಿದ್ದಾರೆ, ಅವರು ನಾವು ನಿರಪರಾಧಿಗಳೆಂದು ಪತ್ರಿಕೆಗಳಲ್ಲಿ ಮತ್ತು ಬೇರೆಬೇರೆ ಸೆಮಿನಾರ್‌ಗಳಲ್ಲಿ ಮಾತನಾಡುತ್ತಿದ್ದಾರೆ. ಯಾರು ತಪ್ಪಿತಸ್ಥರಾಗಬೇಕಾಗಿದೆ, ಅವರು ನಾವು ನಿರಪರಾಧಿಗಳು ಎಂದು ಹೇಳಿಕೊಳ್ಳುತ್ತಿದ್ದಾರೆ. ಈ ವಿಚಾರದಲ್ಲಿ ಯಾರಿಗೆ ಸಂಬಂಧವಿಲ್ಲ, ಹಿಂದಿನ ಸರ್ಕಾರಗಳು ಮಾಡಿದಂಥಾದ್ದನ್ನು ಮುಂದುವರೆಸಿಕೊಂಡು ಹೋದಂಥ ನಿರಪರಾಧಿಗಳನ್ನು, ಅಪರಾಧಿಗಳು ಎಂದು ಮಾಡುವಂಥ ಚರ್ಚೆ ಕೆಲವು ಕಡೆ ಆಗುತ್ತಿದೆ. ಬಹಳ ವಿಪರ್ಯಾಸವಾದ ಚರ್ಚೆ ಇದರ ಮೇಲೆ ಆಗುತ್ತಿದೆ. ಅದರ ಮೇಲೆ ನಾವು ಸವಿಸ್ತಾರವಾಗಿ ಚರ್ಚೆ ಮಾಡಬೇಕು. ಈಗ ವೇಳೆಯ ಅಭಾವವಿರುವುದರಿಂದ, ನಾಳೆ ನಾನು ನನ್ನ ಮಾತನ್ನು ಮುಂದುವರೆಸುತ್ತೇನೆ. ನಾಳೆ ನಾನು ಡೀಟೀಲಾಗಿ ಮುಂದುವರಿಸುತ್ತೇನೆ. ಅದಕ್ಕೆ ಅನುಮತಿಯನ್ನು ಕೊಡಬೇಕೆಂದು ಕೇಳುತ್ತಿದ್ದೇನೆ.

ಛೇರ್ಮನ್ :- ಈಗ ಸದನವನ್ನು ನಾಳೆ ಬೆಳಗ್ಗೆ 11.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಸಂಜೆ 6 ಗಂಟೆ 34 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ 4–07–06ರ ಮಂಗಳವಾರ ಬೆಳಗ್ಗೆ 11.00 ಗಂಟೆಗೆ ಸಭೆ ಸೇರಲು ತೀರ್ಮಾನಿಸಿತು)

ಅನುಬಂಧ (ಅ)

ದಿನದ ಪಟ್ಟಿಯಲ್ಲಿ ಸೇರಿಸಲಾದ ಚುಕ್ಕೆ ಗುರುತಿನ ಪ್ರಶ್ನೆಗಳು.

ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ವಿತ್ತೀಯ ಕೊರತೆ

203 (1109) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಎಷ್ಟು ಮೊತ್ತದ ವಿತ್ತೀಯ ಕೊರತೆಯಾಗಿರುತ್ತದೆ;

ಆ) ಈ ವಿತ್ತೀಯ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ರೂಪಿಸಿದೆ;

ಇ) ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ರಾಜ್ಯ ಸರ್ಕಾರವು ತನ್ನ ಪಾಲಿನ ತೆರಿಗೆಯನ್ನು ಕಡಿತ ಮಾಡುವುದೇ;

ಈ) ಹಾಗಿಲ್ಲದಿದ್ದಲ್ಲಿ, ಕಾರಣಗಳೇನು?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) :

ಅ) 2006–07ನೇ ಸಾಲಿನ ಆಯವ್ಯಯದಲ್ಲಿ 5210.56 ಕೋಟಿ ರೂಪಾಯಿ ವಿತ್ತೀಯ ಕೊರತೆಯನ್ನು ಅಂದಾಜಿಸಲಾಗಿದೆ.

ಆ) ಸರ್ಕಾರವು ವಿತ್ತೀಯ ಸುಧಾರಣೆ ಅಧಿನಿಯಮವನ್ನು ಜಾರಿಗೆ ತಂದಿರುತ್ತದೆ. ಅಂದಾಜಿಸಲಾದ ವಿತ್ತೀಯ ಕೊರತೆಯಾದ 5210.57 ಕೋಟಿ ರೂಪಾಯಿಗಳು ಜಿಎಸ್‌ಡಿಪಿಯ ಶೇಕಡ 2.82 ರಷ್ಟಿರುತ್ತದೆ. ಸರ್ಕಾರದ ಸಾಲ ಪಡೆಯುವ ಕಾರ್ಯಕ್ರಮವು ಸಾಲದ ಲಭ್ಯತೆಗಿಂತ ಹೆಚ್ಚಾಗಿ ಸಾಲ ಮರುಪಾವತಿ ಸಾಮರ್ಥ್ಯವನ್ನು ಆಧರಿಸಿದೆ. ತೆರಿಗೆ ಮತ್ತು ತೆರಿಗೆಯೇತರ ಸಂಪನ್ಮೂಲ ಸಂಗ್ರಹಣೆಯಲ್ಲಿ ಗಣನೀಯ ಹೆಚ್ಚಳ ಸಾಧನೆ, ಅಭಿವೃದ್ಧಿಯೇತರ ವೆಚ್ಚದಲ್ಲಿ ಕಡಿತಕ್ಕೆ ಕ್ರಮ, ಎಲ್ಲಾ ವಲಯಗಳಲ್ಲೂ ಸಹಾಯಧನದ ಸೂಕ್ತ ನಿರ್ವಹಣೆಯನ್ನು ಖಚಿತಪಡಿಸುವುದು, ಸಾರ್ವಜನಿಕ ವೆಚ್ಚಗಳ ಉತ್ಪಾದಕತೆಯಲ್ಲಿ ಸುಧಾರಣೆ, ಸಂಪನ್ಮೂಲ ಸಂಗ್ರಹಣೆಯಲ್ಲಿ ಮತ್ತು ವೆಚ್ಚಗಳಲ್ಲಿ ಆದಾಯ ಸೋರಿಕೆ ತಡೆಗಟ್ಟಲು ಮತ್ತು ಭ್ರಷ್ಟಾಚಾರ ಹತ್ತಿಕ್ಕಲು ಅನುವಾಗುವಂತೆ ಆಡಳಿತ ಯಂತ್ರವನ್ನು ಜಾಗೃತಗೊಳಿಸುವುದು – ಈ ಕ್ರಮಗಳಿಂದ ವಿತ್ತೀಯ ಕೊರತೆಯನ್ನು ನಿಯಂತ್ರಿಸಲು ಗುರಿಯನ್ನು ಹೊಂದಿದೆ.

ಇ) – ಇಲ್ಲ –

ಈ) ರಾಜ್ಯ ಸರ್ಕಾರವು 2006–07ನೇ ಆಯವ್ಯಯ ಅಂದಾಜು ಪಟ್ಟಿ ತಯಾರಿಸುವಾಗ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳಿಂದ ಉಂಟಾಗುವ ಆಧಾಯವನ್ನು ಹೆಚ್ಚುವರಿಯಾಗಿ ಗುರುತಿಸಿದ್ದು, ಈಗಿನಂತೆ ಅವುಗಳ ಮೇಲಿರುವ ತೆರಿಗೆಯನ್ನು ಇಳಿಸಿದಲ್ಲಿ ರಾಜ್ಯ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತದೆ, ಹಾಗೂ ರಾಜ್ಯದ ಅಭಿವೃದ್ಧಿ ಕಾಮಗಾರಿಗಳ / ಯೋಜನೆಗಳ ಮೇಲೆ ಪರಿಣಾಮ ಬೀರಿ ರಾಜ್ಯದ ಅಭಿವೃದ್ಧಿ ಕುಂಠಿತವಾಗುತ್ತದೆ.

ಗ್ರಾಮ ಕರಣಿಕರು

205 (821) ಶ್ರೀ ಪದ್ಮನಾಭ ಕೊಟ್ಟಾರಿ ಕೆ. (ವಿಟ್ಲ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಂದಾಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು ಗ್ರಾಮ ಕರಣಿಕರ ಸಂಖ್ಯೆ ಎಷ್ಟು?

ಆ) ಖಾಲಿ ಇರುವ ಗ್ರಾಮಕರಣಿಕರ ಹುದ್ದೆಗಳು ಎಷ್ಟು?

ಇ) ಗ್ರಾಮಕರಣಿಕರ ಕೊರತೆ ಇರುವುದನ್ನು ಸರ್ಕಾರ ಗಮನಿಸಿದೆಯೇ?

ಈ) ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ದಕ್ಷಿಣ ಕನ್ನಡ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) 8244

ಆ) 525

ಇ) ಹೌದು